ಹಾಸನ ನಗರ ಗೃಹ ನಿರ್ಮಾಣ ಸಹಕಾರ ಸಂಘ ನಿ.,
ದೇವರಾಜ ಅರಸ್ ಮಾರ್ಕೆಟ್, ಹಾಸನ. ☎ 264825

ವಾರ್ಷಿಕ ಬಡ್ಡಿ ದರದ ವಿವರಗಳು	ಸಾಮಾನ್ಯರಿಗೆ %	ಹಿರಿಯ ನಾಗರಿಕರಿಗೆ %
* 1 ವರ್ಷದಿಂದ 3 ವರ್ಷಗಳವರೆಗೆ	10.5	11
* 181ದಿನಗಳಿಂದ 365 ದಿನಗಳವರೆಗೆ	8	8.5
* 91 ದಿನಗಳಿಂದ 180 ದಿನಗಳವರೆಗೆ	7	7.5
* 31 ದಿನಗಳಿಂದ 90 ದಿನಗಳವರೆಗೆ	6	6.5
* 90 ತಿಂಗಳುಗಳಲ್ಲಿ ಠೇವಣಿ ಮೊತ್ತ ದ್ವಿಗುಣ		

-ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ

ಜನತಾ ಮಾಧ್ಯಮ

ಸಂಪಾದಕ : ಆರ್.ಪಿ.ವೆಂಕಟೇಶಮೂರ್ತಿ

ವ್ಯವಸ್ಥಾಪಕ ಸಂಪಾದಕ :ಎಸ್.ಎನ್.ಮಂಜುನಾಥದತ್ತ

PREMIER MARKETING
#817/A,Opp: Mallige Residency,Govt.High School Field,Road,Hassan.
Ph:9620621333
9448742971
9844090035
08172-233509
Dr.Aquaguard
RO+UV+TDS Controller Water Purifier & Water Softner

ಒಂದೇ ದಿನ 13.46 ಕೋಟಿ ಆದಾಯ ಗಳಿಸಿ ಕೆಎಸ್‌ಆರ್‌ಟಿಸಿ ದಾಖಲೆ

ಒಂದೇ ದಿನದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಸಂಸ್ಥೆಯ ಇತಿಹಾಸದಲ್ಲಿಯೇ ಪ್ರಥಮ ಬಾರಿಗೆ 13.46 ಕೋಟಿ ರೂ. ಅತ್ಯಧಿಕ ದಾಖಲೆಯ ಆದಾಯವನ್ನು ಗಳಿಸಿದೆ. ಅ.3ರಂದು ನಿಗಮವು ಒಟ್ಟು 13.46 ಕೋಟಿ ರೂ. ಆದಾಯ ಗಳಿಸಿದೆ. ಈ ಆದಾಯವು ನಿಗಮದ ಚರಿತ್ರೆಯಲ್ಲಿಯೇ ದಾಖಲೆಯ ಸಾಧನೆಯಾಗಿದೆ. 2015ರ ದಸರಾ ಸಂದರ್ಭದಲ್ಲಿ ಸಂಸ್ಥೆ ಗಳಿಸಿದ ಆದಾಯ 12.75 ಕೋಟಿ ರೂ. ಆಗಿತ್ತು.

ಕೋಚ್ ರವಿಶಾಸ್ತ್ರಿಗೆ 1.20 ಕೋಟಿ ರೂ. ಸಂದಾಯ ಮಾಡಿದ ಬಿಸಿಸಿಐ

ಟೀಂ ಇಂಡಿಯಾದ ಮುಖ್ಯ ತರಬೇತುದಾರ ರವಿಶಾಸ್ತ್ರಿಗೆ ಬಿಸಿಸಿಐ 1.20 ಕೋಟಿ ರೂ. ಸಂದಾಯ ಮಾಡಿದೆ. ಜೂನ್‌ನಲ್ಲಿ ಅನಿಲ್ ಕುಂಬ್ಳೆ ಭಾರತ ತಂಡದ ತರಬೇತುದಾರನ ಹುದ್ದೆಯಿಂದ ಕೆಳಗಿಳಿದ ನಂತರ ಆ ಹುದ್ದೆಯನ್ನು ಅಲಂಕರಿಸಿದ ರವಿಶಾಸ್ತ್ರಿಗೆ ಅಂದಿನಿಂದಲೂ ವರಮಾನವನ್ನು ಸಂದಾಯ ಮಾಡಿರಲಿಲ್ಲ. ಈಗ ಮೂರು ತಿಂಗಳ ಸಂಬಳದ ರೂಪದಲ್ಲಿ 1.20 ಕೋಟಿ ರೂ.ಗಳನ್ನು ಸಂದಾಯ ಮಾಡಲಾಗಿದೆ ಎಂದು ಬಿಸಿಸಿಐ ತಿಳಿಸಿದೆ.



10ನೇ ವರ್ಷವೂ ಮುಖೇಶ್ ಭಾರತದ ಅತ್ಯಂತ ಶ್ರೀಮಂತ ಉದ್ಯಮಿ

ರಿಲಾಯನ್ಸ್ ಜಿಯೋ ಮೂಲಕ ದೂರಸಂಪರ್ಕ ಕ್ಷೇತ್ರದಲ್ಲಿ ಕ್ರಾಂತಿ ಸೃಷ್ಟಿಸಿರುವ ರಿಲಾಯನ್ಸ್ ಇಂಡಸ್ಟ್ರಿಯಲ್ ಲಿಮಿಟೆಡ್ ಒಡೆಯ ಮುಖೇಶ್ ಅಂಬಾನಿ ಫೋರ್ಬ್ಸ್ ನಿಯತಕಾಲಿಕದ ಜಗತ್ತಿನ 100 ಅತ್ಯಂತ ಸಿರಿವಂತರ ಪಟ್ಟಿಯಲ್ಲಿ ಸತತ 10ನೇ ವರ್ಷವೂ ಸ್ಥಾನ ಪಡೆದಿದ್ದಾರೆ. 38 ಶತಕೋಟಿ ಡಾಲರ್ (2,470 ಶತಕೋಟಿ ರೂ.ಗಳು) ಸಂಪತ್ತಿನೊಂದಿಗೆ ಭಾರತದ ಅತ್ಯಂತ ಶ್ರೀಮಂತ ಉದ್ಯಮಿ ಎನಿಸಿದ್ದಾರೆ.

ಜನತಾಮಾಧ್ಯಮ ಬೆಳಗಿನ ದೈನಿಕ | JANATHAMADHYAMA | KARKAN. RNI 41566. | ಸಂಪುಟ : 40 | ಸಂಚಿಕೆ :328 | ಶುಕ್ರವಾರ | ಅ.6, 2017 | ದೂರವಾಣಿ : 268494 | ಪುಟ-4 | ರೂ.2-00 | NO. HSN-761/ 2015-17

ಚನ್ನಪಟ್ಟಣ ಕೆರೆಗೆ ನೀರು : ಶಾಸಕರಿಂದ ಇಂದು ಪರಿಶೀಲನೆ

ಹಾಸನ : ನಗರದ ಚನ್ನಪಟ್ಟಣ ಕೆರೆಗೆ ನೀರು ತುಂಬಿಸುವ ಸಂಬಂಧ ಪರಿಶೀಲಿಸಲು ಶುಕ್ರವಾರ ಬೆಳಿಗ್ಗೆ ಅಧಿಕಾರಿಗಳೊಂದಿಗೆ ಭೇಟಿ ನೀಡುವುದಾಗಿ ನಗರಸಭೆ ಅಧ್ಯಕ್ಷ ಹೆಚ್.ಎಸ್. ಅನಿಲ್ ಕುಮಾರ್ ತಿಳಿಸಿದ್ದಾರೆ.

ಪತ್ರಿಕೆಯೊಂದಿಗೆ ಮಾತನಾಡಿದ ಅವರು, ಗುರುವಾರ ವಾಲ್ಮೀಕಿ ಜಯಂತಿ ಕಾರ್ಯಕ್ರಮವಿದ್ದುದರಿಂದ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು ರಜೆ ಇದ್ದುದರಿಂದ ಚನ್ನಪಟ್ಟಣ ಕೆರೆ ಪರಿಶೀಲನೆಗೆ ಹೋಗಲಾಗಲಿಲ್ಲ. ಶುಕ್ರವಾರ ಬೆಳಿಗ್ಗೆ ಇಂಜಿನಿಯರ್ ಅವರು ಕರ್ತವ್ಯಕ್ಕೆ ಹಾಜರಾಗುತ್ತಿದ್ದು, ಶಾಸಕ ಹೆಚ್.ಎಸ್. ಪ್ರಕಾಶ್ ಅವರ ನೇತೃತ್ವದಲ್ಲಿ ಕೆರೆ ಪರಿಶೀಲಿಸಿ ನೀರು ತುಂಬಿಸುವ ಬಗ್ಗೆ ನಿರ್ಧರಿಸಲಾಗುವುದು ಎಂದರು.

ಲೋಕಸಭೆ-ವಿಧಾನಸಭೆಗಳ ಚುನಾವಣೆ ಏಕಕಾಲಕ್ಕೆ

ನವದೆಹಲಿ : 2018ರ ಸೆಪ್ಟಂಬರ್ ವೇಳೆಗೆ ದೇಶದಲ್ಲಿ ಲೋಕಸಭೆ ಮತ್ತು ರಾಜ್ಯ ವಿಧಾನಸಭಾ ಚುನಾವಣೆಗಳನ್ನು ಏಕಕಾಲದಲ್ಲಿ ನಡೆಸಲು ತಾನು ಎಲ್ಲ ರೀತಿಯಲ್ಲೂ ಶಕ್ತನಿದ್ದೇನೆ ಎಂದು ಭಾರತದ ಚುನಾವಣಾ ಆಯೋಗ ಹೇಳಿದ್ದು, ಇದರಿಂದ ಇನ್ನು ಮುಂದೆ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಿಗೆ ಏಕಕಾಲದಲ್ಲಿ ಚುನಾವಣೆ ನಡೆಯುವುದು ಬಹುತೇಕ ಖಚಿತವಾಗಿದೆ.

ಮುಂದಿನ ವರ್ಷದ ಸೆಪ್ಟೆಂಬರ್ ಆಸುಪಾಸಿನಲ್ಲಿ ಏಕಕಾಲಕ್ಕೆ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳ ಚುನಾವಣೆ ನಡೆಯುವ ಎಲ್ಲಾ ಸಾಧ್ಯತೆಗಳಿದ್ದು, ಇದಕ್ಕಾಗಿ ಚುನಾವಣಾ ಆಯೋಗ ಮತದಾನಕ್ಕೆ ಬೇಕಾದ ಎಲ್ಲಾ ಸಿದ್ದತೆಗಳನ್ನು ಮಾಡಿಕೊಳ್ಳುವಲ್ಲಿ ಈಗಿನಿಂದಲೇ ನಿರತವಾಗಿದೆ.

ಏಕಕಾಲಕ್ಕೆ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳ ಚುನಾವಣೆಯನ್ನು ನಡೆಸಲು ಒಲವು ವ್ಯಕ್ತಪಡಿಸಿ, ಈ ಬಗ್ಗೆ ರಾಜಕೀಯ ಪಕ್ಷಗಳು ಒಮ್ಮತಕ್ಕೆ ಬರಬೇಕೆಂದು ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ ಬೆನ್ನಲ್ಲೇ ದೇಶದಲ್ಲಿ ಏಕಕಾಲಕ್ಕೆ ಸಂಸತ್ ಹಾಗೂ ವಿಧಾನಸಭೆಯ ಚುನಾವಣೆಗಳು ನಡೆಯುವ ಸಾಧ್ಯತೆ ಬಹುತೇಕ ನಿಚ್ಚಳವಾಗಿದೆ.

ಚುನಾವಣಾ ಆಯೋಗ ಏಕಕಾಲಕ್ಕೆ ಲೋಕಸಭೆ ಮತ್ತು ವಿಧಾನಸಭೆ ಚುನಾವಣೆಯನ್ನು ನಡೆಸಲು ಸಿದ್ದವಿದೆ. ಈ ಬಗ್ಗೆ ಕೇಂದ್ರ ಸರ್ಕಾರ ಅಗತ್ಯ ಕಾನೂನಿಗೆ ತಿದ್ದುಪಡಿ ಮಾಡಿಕೊಂಡು ಸಮ್ಮತಿಸಿದರೆ ಮಾತ್ರ ಎಂದು ಚುನಾವಣಾ ಆಯೋಗ ಸ್ಪಷ್ಟಪಡಿಸಿದೆ.

ಮುಂದಿನ ವರ್ಷದ ಸೆಪ್ಟೆಂಬರ್‌ನಲ್ಲಿ ಲೋಕಸಭೆ ಹಾಗೂ ವಿಧಾನಸಭೆ ಚುನಾವಣೆ ನಡೆಸುವ ಸಂಬಂಧ ಅಗತ್ಯವಾಗಿರುವ 40 ಲಕ್ಷ ವಿವಿಪ್ಯಾಟ್ ಮತಯಂತ್ರಗಳ ಖರೀದಿಗೆ ಕೇಂದ್ರ ಸರ್ಕಾರಕ್ಕೆ ಈಗಾಗಲೇ ಮನವಿ ನೀಡಿದ್ದು, ಈ ನಿಟ್ಟಿನಲ್ಲಿ ಆಯೋಗ ಕಾರ್ಯೋನ್ಮುಖವಾಗಿದೆ. ಇವುಗಳನ್ನು ಖರೀದಿಸಿದ ಬಳಿಕ ಒಟ್ಟಾಗಿ ಚುನಾವಣೆ ನಡೆಸಬಹುದು ಎಂದು ಮುಖ್ಯ ಚುನಾವಣಾ ಆಯುಕ್ತ ಒ.ಪಿ.ರಾವತ್ ಹೇಳಿದ್ದಾರೆ.

ವಿವಿಪ್ಯಾಟ್ ಮತಯಂತ್ರಗಳಿಗೆ ಈಗಾಗಲೇ ಚುನಾವಣಾ ಆಯೋಗ ಆರ್ಡರ್ ನೀಡಿದೆ. ಬಹುತೇಕ ರಾಜಕೀಯ ಪಕ್ಷಗಳು ವಿದ್ಯುನ್ಮಾನ ಮತಯಂತ್ರಗಳ ಬಗ್ಗೆ ಅಪಸ್ವರ ಎತ್ತಿದ ಹಿನ್ನೆಲೆಯಲ್ಲಿ ಚಲಾವಣೆಯಾದ ಮತಗಳನ್ನು ಖಾತರಿಪಡಿಸಿಕೊಳ್ಳುವ ವಿವಿಪ್ಯಾಟ್ ಮತಯಂತ್ರಗಳ ಸಿದ್ಧತೆ ಮಾಡಿಕೊಳ್ಳುವಲ್ಲಿ ಆಯೋಗ ಕಾರ್ಯೋನ್ಮುಖವಾಗಿದೆ ಎಂದು ಹೇಳಿದರು.

ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ದೇಶದಲ್ಲಿ ಏಕಕಾಲಕ್ಕೆ ಚುನಾವಣೆ ನಡೆಸಲು ಉತ್ಸುಕವಾಗಿದ್ದು, ಇತರ ರಾಜ್ಯಗಳ ಮತ್ತು ಪ್ರಾದೇಶಿಕ ಪಕ್ಷಗಳ ಸಮ್ಮತಿ ಪಡೆಯಲು ಪ್ರಯತ್ನ ನಡೆಸಿದೆ.

☐ ರಾಷ್ಟ್ರಮಟ್ಟದ ಜೈನ ವಿದ್ವತ್ ಸಮ್ಮೇಳನಕ್ಕೆ ತೆರೆ

ಬಹುಮುಖಿ ಕಾರ್ಯಕ್ರಮ : ಸಚಿವ ಮಂಜು ಶ್ಲಾಘನೆ

ಶ್ರವಣಬೆಳಗೊಳ : ಶ್ರೀಕ್ಷೇತ್ರ ಶ್ರವಣಬೆಳಗೊಳ ಮಠದ ವತಿಯಿಂದ ಮುಂದಿನ ವರ್ಷ ನಡೆಯುವ ಮಹಾಮಸ್ತಕಾಭಿಷೇಕ ಅಂಗವಾಗಿ ಎಲ್ಲಾ ವರ್ಗಕ್ಕೂ ಸಲ್ಲುವ, ಸರ್ವರನ್ನೂ ಉತ್ತೇಜನಗೊಳಿಸುವ ಬಹುಮುಖಿ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎ.ಮಂಜು ಅಭಿಪ್ರಾಯಪಟ್ಟರು.

ಕಳೆದ 5 ದಿನಗಳಿಂದ ಗೊಮ್ಮಟ ನಗರದ ಶ್ರುತಕೇವಲಿ ಭದ್ರಬಾಹು ಸಭಾ ಮಂಟಪದಲ್ಲಿ ಗುರುವಾರ ನಡೆದ ರಾಷ್ಟ್ರಮಟ್ಟದ ಜೈನ ವಿದ್ವತ್ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಹೆಚ್ಚು ಕಡಿಮೆ ಕಳೆದ 1 ಒಂದು ವರ್ಷದಿಂದಲೂ ಮಸ್ತಕಾಭಿಷೇಕ ಹಿನ್ನೆಲೆಯಲ್ಲಿ ಸಂಸ್ಕೃತ ಸಮ್ಮೇಳನ, ಅಂತರರಾಷ್ಟ್ರೀಯ ಜೈನ ಮಹಿಳಾ ಸಮ್ಮೇಳನ, ವಿದ್ವತ್ ಸಮ್ಮೇಳನ ಸೇರಿದಂತೆ ಹಲವು ಬಹುಪಯೋಗಿ ಕಾರ್ಯಕ್ರಮ ಸಂಘಟಿಸುವ ಮೂಲಕ ಶ್ರೀಗಳು ಅತ್ಯುತ್ತಮ ಕೆಲಸ ಮಾಡುತ್ತಿದ್ದಾರೆ ಎಂದು ಪ್ರಶಂಸಿಸಿದರು.

ಯಾರೇ ಆಗಲೀ ಒಂದು ದೊಡ್ಡ ಮಟ್ಟದ ಉತ್ಸವ ನಡೆಸುವಾಗ ಅದರ ಬಗ್ಗೆಯೇ ಹೆಚ್ಚು ಗಮನ ಕೇಂದ್ರೀಕರಣ ಮಾಡುತ್ತಾರೆ. ಆದರೆ ಶ್ರೀಗಳು ಅದರ ಜೊತೆಯಲ್ಲೇ ಹಲವು ಸಮ್ಮೇಳನ ನಡೆಸುವ ಮೂಲಕ ದೇಶದ ವಿವಿಧ ಕ್ಷೇತ್ರಗಳ ಗಣ್ಯರನ್ನು ಒಂದೆಡೆ ಸೇರಿಸುವ ಮಹತ್ ಕೆಲಸ ಮಾಡುತ್ತಿದ್ದಾರೆ. ನಿಜಕ್ಕೂ ಇದು ಅಪರೂಪದ ಕೆಲಸ ಎಂದು ಬಣ್ಣಿಸಿದರು.

ಅಧಿಕಾರಿಗಳ ಭರವಸೆ : ಉಪವಾಸ ಸತ್ಯಾಗ್ರಹ ಅಂತ್ಯ

ಬೇಲೂರು : ಮಾದಿಹಳ್ಳಿ ಹಾಗೂ ಜಾವಗಲ್ ಹೋಬಳಿಗಳಿಗೆ ರಣಘಟ್ಟ, ಎತ್ತಿನಹೊಳೆ ಮತ್ತು ಯಗಚಿ ಏತ ನೀರಾವರಿ ಯೋಜನೆ ಮೂಲಕ ನೀರಾವರಿ ಸೌಲಭ್ಯ ಕಲ್ಪಿಸುವಂತೆ ಒತ್ತಾಯಿಸಿ ರೈತ ಸಂಘ ಮತ್ತು ಸ್ವಾಮೀಜಿಗಳ ನೇತೃತ್ವದಲ್ಲಿ ಬುಧವಾರ ಆರಂಭವಾಗಿದ್ದ ಅನಿರ್ಧಿಷ್ಟಾವಧಿ ಉಪವಾಸ ಸತ್ಯಾಗ್ರಹವನ್ನು ಅಧಿಕಾರಿಗಳು ಹಾಗೂ ಸಚಿವರ ಭರವಸೆ ಮೇರೆಗೆ ಗುರುವಾರ ಅಂತ್ಯಗೊಳಿಸಲಾಯಿತು.

ಉಪವಾಸ ಸತ್ಯಾಗ್ರಹ ಸ್ಥಳಕ್ಕೆ ಆಗಮಿಸಿದ ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಶಿವಶಂಕರ್ ಹಾಗೂ ವಿಶ್ವೇಶ್ವರಯ್ಯ ಜಲ ನಿಗಮದ ವ್ಯವಸ್ಥಾಪಕ ನಿರ್ದೇಶಕ ಜಯಪ್ರಕಾಶ್, ಬೇಡಿಕೆ ಈಡೇರಿಸುವುದಾಗಿ ಸರ್ಕಾರದ ಪರವಾಗಿ ಭರವಸೆ ನೀಡಿದರು.

ಆದರೆ ಅವರ ಮಾತನ್ನು ಕೇಳದ ಶ್ರೀ ಸೋಮಶೇಖರ ಶಿವಾಚಾರ್ಯ ಸ್ವಾಮೀಜಿ, ಅಧಿಕಾರಿಗಳು ಬರೀ ಭರವಸೆಯನ್ನೇ ನೀಡುತಿದ್ದಾರೆ. ಕಾಮಗಾರಿ ಪ್ರಾರಂಭವಾಗಿ ಎರಡೂವರೆ ವರ್ಷವಾದರೂ ಇನ್ನೂ ಹಳ್ಳಿಗಳ ಪಟ್ಟಿ ಮಾಡಿಲ್ಲ ಎಂದು ದೂರಿದರು.

ಅಧಿಕಾರಿಗಳು ಮಾನವೀಯತೆಯಿಂದ ನಮ್ಮ ಭಾಗಕ್ಕೆ ನೀರು ಹರಿಸುವುದಕ್ಕೆ ಮುಂದಾಗಬೇಕು. ಇಲ್ಲದಿದ್ದಲ್ಲಿ ನಮ್ಮ ಹೋರಾಟ ಉಗ್ರ ರೂಪ ತಾಳಲಿದೆ. ಜಿಲ್ಲೆಯಲ್ಲಿ ಎಲ್ಲೆಲ್ಲಿ ನೀರಾವರಿ ಕಚೇರಿ ಇದೆಯೋ ಅಲ್ಲೆಲ್ಲ ಮುತ್ತಿಗೆ ಹಾಕಬೇಕಾಗುತ್ತದೆ ಎಂದು ಎಚ್ಚರಿಸಿದರು.

ವಿಶ್ವೇಶ್ವರಯ್ಯ ಜಲ ನಿಗಮದ ವ್ಯವಸ್ಥಾಪಕ ನಿರ್ದೇಶಕ ಜಯಪ್ರಕಾಶ್ ಹಾಗೂ ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಶಿವಶಂಕರ್ ಪ್ರತಿಕ್ರಿಯಿಸಿ, ಈ ಭಾಗದ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸುವ ಸಂಬಂಧ ನೀರಾವರಿ ಸಚಿವರ ಹತ್ತಿರ ಮಾತನಾಡಿದ್ದು, ನೀರು ಕೊಡಲು ಸಚಿವರು ಸಿದ್ಧರಿದ್ದಾರೆ ಎಂದು ಹೇಳಿದರು.

ಈ ಭರವಸೆ ಮೇರೆಗೆ ಸ್ವಾಮೀಜಿಗಳು ತಮ್ಮ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹವನ್ನು ಅಂತ್ಯಗೊಳಿಸಿದರು.

ಸಿಡಿಲು ಬಡಿದು ರೈತ ಸ್ಥಳದಲ್ಲೇ ಸಾವು



ಅರಕಲಗೂಡು : ತಾಲ್ಲೂಕಿನಲ್ಲಿ ಗುರುವಾರ ಸಂಜೆ 5 ಗಂಟೆಯಲ್ಲಿ ಮಿಂಚು ಗುಡುಗು ಸಹಿತ ಸುರಿದ ಮಳೆಯ ಸಂದರ್ಭದಲ್ಲಿ ಸಿಡಿಲು ಬಡಿದು ದುಮ್ಮಿ ಕೊಪ್ಪಲಿನ ಜವರೇಗೌಡ ಅವರ ಪುತ್ರ ರೈತ ರಾಜೇಗೌಡ(58) ಎಂಬುವವರು ತಮ್ಮ ಜಮೀನು ಬಳಿ ಸಾವನ್ನಪ್ಪಿದ್ದಾರೆ. ಅವರು ಪತ್ನಿ ಹಾಗೂ ಇಬ್ಬರು ಮಕ್ಕಳನ್ನು ಅಗಲಿದ್ದಾರೆ.

ಇಂದು ರಾಜ್ಯ ಮಟ್ಟದ ಷಟಲ್ ಬ್ಯಾಡ್ಮಿಂಟನ್ ಪಂದ್ಯಾವಳಿ

ಹಾಸನ : ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಬೆಳಿಗ್ಗೆ ರಾಜ್ಯ ಮಟ್ಟದ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ಷಟಲ್ ಬ್ಯಾಡ್ಮಿಂಟನ್ ಪಂದ್ಯಾವಳಿ ಏರ್ಪಡಿಸಲಾಗಿದೆ. ಇಂದಿನಿಂದ ನಡೆಯುವ ಪಂದ್ಯಾವಳಿಯನ್ನು ಸಚಿವ ಎ.ಮಂಜು ಉದ್ಘಾಟಿಸಲಿದ್ದಾರೆ.

ಮಹರ್ಷಿ ವಾಲ್ಮೀಕಿ ಇಡೀ ಸಮಾಜಕ್ಕೆ ದಾರಿದೀಪ

ಹಾಸನ : ಮಹರ್ಷಿ ವಾಲ್ಮೀಕಿ ಕೇವಲ ಒಂದು ಸಮುದಾಯದ ನಾಯಕನಾಗಿರದೆ ಇಡೀ ಸಮಾಜಕ್ಕೆ ದಾರಿದೀಪವಾಗಿದ್ದಾರೆ ಎಂದು ಪಶು ಸಂಗೋಪನೆ ಹಾಗೂ ರೇಷ್ಮೆ ಇಲಾಖೆ ಸಚಿವ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎ.ಮಂಜು ಅಭಿಪ್ರಾಯಪಟ್ಟಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ (ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ) ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಗುರುವಾರ ಏರ್ಪಡಿಸಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಸಚಿವರು ಮಾತನಾಡಿದರು.

ಮಹರ್ಷಿ ವಾಲ್ಮೀಕಿ ನಮ್ಮೆಲ್ಲರಿಗೂ ಆದರ್ಶವಾಗಬೇಕು ಎಂದ ಅವರು, ಕಟುಕ ಬುದ್ಧಿ ಬಿಟ್ಟು ದಿವ್ಯಜ್ಞಾನ ಸಂಪಾದಿಸಿದ ವಾಲ್ಮೀಕಿ ಹಿಂಸೆಯ, ವೇದನೆಯ, ಪ್ರೀತಿಯ, ನೆಮ್ಮದಿಯ ಬಗ್ಗೆ ತಿಳಿಸಿದ್ದಾರೆ ಎಂದರು.

ರಾಜ್ಯ ಸರ್ಕಾರ ಪರಿಶಿಷ್ಟ ಪಂಗಡದವರ ಶ್ರೇಯೋಭಿವೃದ್ಧಿಗೆ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ ಸ್ಥಾಪಿಸಿದೆ. ಈ ಸಮುದಾಯದ ಶಿಕ್ಷಣ ಮತ್ತು ಮೂಲಭೂತ ಸೌಕರ್ಯ ವೃದ್ಧಿಗೆ ಆದ್ಯತೆ ನೀಡಿದೆ. ಅದನ್ನು ಸದುಪಯೋಗ ಮಾಡಿಕೊಂಡು ಎಲ್ಲಾ ಕ್ಷೇತ್ರಗಳಲ್ಲಿ ಮುಂದೆ ಬರಬೇಕು ಎಂದು ಹೇಳಿದರು.

ಶಾಸಕ ಹೆಚ್.ಎಸ್.ಪ್ರಕಾಶ್ ಮಾತನಾಡಿ, ವಾಲ್ಮೀಕಿ ಎಲ್ಲಾ ಜಾತಿ ಧರ್ಮಗಳನ್ನು ಮೀರಿದ ದಾರ್ಶನಿಕ. ನಮ್ಮಲ್ಲಿರುವ ಅಸಮಾನತೆಗಳು ಕಡಿಮೆಯಾಗಬೇಕು. ನಾವು ನಮ್ಮ ತಪ್ಪನ್ನು ಅರಿತು ಪರಿವರ್ತನೆಯಾಗುವ ಮೂಲಕ ಉತ್ತಮ ಸಮಾಜ ಕಟ್ಟುವ ಕೆಲಸ ಮಾಡಬೇಕು ಎಂದರು.

ಶೋಷಿತ ಸಮುದಾಯಗಳ ಮಕ್ಕಳಿಗೆ ಉತ್ತಮ ಶಿಕ್ಷಣ ಒದಗಿಸುವ ಮೂಲಕ ಸಮಾಜಮುಖಿಗಳನ್ನಾಗಿಸಲು ಶ್ರಮಿಸಬೇಕು. ಎಲ್ಲರೂ ರಾಮಾಯಣದಲ್ಲಿರುವ ಮೌಲ್ಯಗಳನ್ನು ಮೈಗೂಡಿಸಿಕೊಳ್ಳಬೇಕು ಎಂದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೃಷ್ಣಕುಮಾರ್ ಮಾತನಾಡಿ, ಶೋಷಿತ, ನಿರ್ಲಕ್ಷಿತ ಸಮುದಾಯದಿಂದ ಬಂದ ವಾಲ್ಮೀಕಿ, ಅಂಬೇಡ್ಕರ್, ವ್ಯಾಸ ಮತ್ತಿತರರು ಇಡೀ ಸಮುದಾಯಕ್ಕೆ ದಾರಿದೀಪವಾಗಿದ್ದಾರೆ. ಸಮಾಜದಲ್ಲಿರುವ ವರ್ಗ ತಾರತಮ್ಯ ನಿವಾರಣೆಯಾಗಬೇಕು ಎಂದರು.

ವಿಶೇಷ ಉಪನ್ಯಾಸ ನೀಡಿದ ಎ.ವಿ.ಕೆ. ಕಾಲೇಜು ಕನ್ನಡ ಉಪನ್ಯಾಸಕರಾದ ಡಾ.ಯತೀಶ್ವರ್, ಮಹರ್ಷಿ ವಾಲ್ಮೀಕಿಯವರ ಬದುಕು, ಬರಹ, ಚಿಂತನೆ, ಆದರ್ಶಗಳ ಬಗ್ಗೆ ಪರಿಚಯ ಮಾಡಿಕೊಟ್ಟು, ಸರ್ಕಾರ ಶೋಷಿತ ವರ್ಗದ ಮಕ್ಕಳಿಗೆ ಮಾಡಿರುವ ಪ್ರೋತ್ಸಾಹ ಧನ ಕುರಿತ ಯೋಜನೆ ಬಗ್ಗೆ ವಿವರಿಸಿದರು.

ಇದೇ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು.

(-4ನೇ ಪುಟಕ್ಕೆ)

ಮಾತೃಪೂರ್ಣ ಯೋಜನೆ : ಬಿಸಿಯೂಟದ ಬದಲು ಪ್ಯಾಕೇಜ್ ನೀಡುವುದು ಸೂಕ್ತ

ರಾಮನಾಥಪುರ : ಅಂಗನವಾಡಿಗಳ ಮೂಲಕ ಗರ್ಭಿಣಿಯರಿಗೆ, ಬಾಣಂತಿಯರಿಗೆ ಮಧ್ಯಾಹ್ನದ ಬಿಸಿಯೂಟವನ್ನು ನೀಡುವುದಕ್ಕಿಂತ ಅವರ ಮನೆಗೆ ಒಂದು ಪ್ಯಾಕೇಜ್ ರೂಪದಲ್ಲಿ ನೀಡುವುದು ಸೂಕ್ತ ಎಂದು ಭೂಕಬಳಿಕೆ ಜಂಟಿ ಸದನ ಸಮಿತಿ ಮಾಜಿ ಅಧ್ಯಕ್ಷ ಹಾಗೂ ಕ್ಷೇತ್ರದ ಮಾಜಿ ಶಾಸಕ ಡಾ.ಎ.ಟಿ. ರಾಮಸ್ವಾಮಿ ಸಲಹೆ ನೀಡಿದರು.



ರಾಮನಾಥಪುರದಲ್ಲಿ ಗುರುವಾರ ವರದಿಗಾರರೊಂದಿಗೆ ಮಾತನಾಡಿದ ಅವರು, ಮಹಿಳಾ ಮತ್ತು ಮಕ್ಕಳ ಇಲಾಖೆ, ಆರೋಗ್ಯ ಇಲಾಖೆಗಳ ವತಿಯಿಂದ ಜಾರಿಗೆ ತಂದಿರುವ ಮಾತೃಪೂರ್ಣ ಯೋಜನೆ ಮಾದರಿ ಯೋಜನೆಯಾಗಿದೆ. ತಾಯಿ, ಮಗುವಿನಲ್ಲಿ ಕಂಡು ಬರುವ ರಕ್ತಹೀನತೆ ಹಾಗೂ ಅಪೌಷ್ಠಿಕತೆ ತಡೆಗಟ್ಟುವ ನಿಟ್ಟಿನಲ್ಲಿ ಈ ಯೋಜನೆ ತಂದಿರುವುದು ಅಭಿನಂದನೀಯ ಎಂದರು.

ಅಂಗನವಾಡಿ ಇಲ್ಲದ ಗ್ರಾಮಗಳಲ್ಲಿನ ಮಹಿಳೆಯರಿಗೆ ಹೇಗೆ ಊಟ ಒದಗಿಸಲು ಸಾಧ್ಯ? ಪಕ್ಕದ ಹಳ್ಳಿಗೆ ಗರ್ಭಿಣಿಯರು ಊಟಕ್ಕೆ ಬರಲು ಸಾಧ್ಯವಾಗುತ್ತದೆಯೇ? ಅಲ್ಲದೇ ಅಂಗನವಾಡಿಯಲ್ಲಿ ಮಾಡಿದ ಅಡುಗೆಯನ್ನು ಎಷ್ಟು ಗರ್ಭಿಣಿಯರು ಸೇವಿಸಲು ಸಾಧ್ಯ ಎಂದು ಪ್ರಶ್ನಿಸಿದರು.

ಅಂಗನವಾಡಿಗಳಲ್ಲಿ ಕಾರ್ಯಕರ್ತರೇ ಅಡುಗೆ ಮಾಡಬೇಕು. ಒಬ್ಬೊಬ್ಬ ಮಹಿಳೆಯರಿಗೆ ಒಂದೊಂದು ರೀತಿ ಬಿಸಿಯೂಟ ಬೇಕಾಗುತ್ತದೆ. ಎಲ್ಲವನ್ನೂ ಸಂಭಾಳಿಸಿ ಅಡುಗೆ ಮಾಡಿ ಬಡಿಸುವುದು ಅಂಗನವಾಡಿ ಸಿಬ್ಬಂದಿಗೆ ಕಷ್ಟವಾಗುತ್ತದೆ ಎಂದರು.

14 ವರ್ಷ ಸಚಿವರಾಗಿದ್ದರೂ ನೀರಾವರಿ ಸೌಲಭ್ಯ ಏಕೆ ಕಲ್ಪಿಸಿಲ್ಲ?

ಬಿಜೆಪಿ, ಕಾಂಗ್ರೆಸ್‌ಗೆ ಶಾಸಕ ರೇವಣ್ಣ ಪ್ರಶ್ನೆ

ಹಾಸನ : ಈ ರಾಜ್ಯದಲ್ಲಿ ಕಳೆದ 10 ವರ್ಷದಿಂದ ಅಧಿಕಾರದಲ್ಲಿರುವ ಬಿಜೆಪಿ ಹಾಗೂ ಕಾಂಗ್ರೆಸ್‌ನವರು ಹಾಗೂ ಈ ಎರಡು ರಾಷ್ಟ್ರೀಯ ಪಕ್ಷಗಳ ಮುಖಂಡರೇ 14 ವರ್ಷ ನೀರಾವರಿ ಸಚಿವರಾಗಿದ್ದರೂ ಏಕೆ ಹಾಸನ ಜಿಲ್ಲೆಗೆ ನೀರಾವರಿ ಸೌಲಭ್ಯ ಹಾಗೂ ಶಾಶ್ವತ ಕುಡಿಯುವ ನೀರಿನ ಸೌಲಭ್ಯವನ್ನು ಕಲ್ಪಿಸಿಲ್ಲ ಎಂದು ಜೆಡಿಎಸ್ ಮುಖಂಡ, ಮಾಜಿ ಸಚಿವ ಎಚ್.ಡಿ. ರೇವಣ್ಣ ಪ್ರಶ್ನಿಸಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿದ ಅವರು, ಜಿಲ್ಲೆಯ ಜನರು ಶಾಶ್ವತ ಕುಡಿಯುವ ನೀರಿನ ಸೌಲಭ್ಯಗಳಿಂದ ವಂಚಿತರಾಗಲು ಕಾಂಗ್ರೆಸ್ ಮತ್ತು ಬಿಜೆಪಿಯವರ ಸ್ವಾರ್ಥ ರಾಜಕಾರಣ ಹಾಗೂ ಅದಕ್ಷ ಆಡಳಿತವೇ ಕಾರಣ ಎಂದು ಆರೋಪಿಸಿದರು.

ಎಚ್.ಡಿ.ದೇವೇಗೌಡರು ಅಧಿಕಾರದಲ್ಲಿದ್ದಾಗ ಜಿಲ್ಲೆಗೆ ನೀರಾವರಿ ಹಾಗೂ ಶಾಶ್ವತ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು ಹೋರಾಟ ಮಾಡಿದ್ದಾರೆ. ಹೇಮಾವತಿ, ಯಗಚಿ, ವಾಟೆಹೊಳೆ ಅಣೆಕಟ್ಟು ನಿರ್ಮಾಣ ಮಾಡಿದ್ದು ದೇವೇಗೌಡರು. ಹೇಮಾವತಿ ಅಣೆಕಟ್ಟು ನಿರ್ಮಾಣಕ್ಕಾಗಿ ಪಕ್ಷೇತರ ಶಾಸಕರಾಗಿದ್ದ ದೇವೇಗೌಡರು ಸಂಸ್ಥಾ ಕಾಂಗ್ರೆಸ್ ಸೇರಿ ವೀರೇಂದ್ರ ಪಾಟೀಲರ ಸ್ನೇಹ ಬೆಳೆಸಿದರು. ದೇವೇಗೌಡರು ನೀರಾವರಿ ಸಚಿವರಾಗಿದ್ದಾಗ 1986 ಯಗಚಿ ಅಣೆಕಟ್ಟು ನಿರ್ಮಾಣಕ್ಕೆ ಅಡಿಗಲ್ಲು ಹಾಕಿದ್ದರು. ಆನಂತರ ನೆನೆಗುದಿಗೆ ಬಿದ್ದಿದ್ದ ಯಗಚಿ ಯೋಜನೆಯನ್ನು ಅವರು 1994ರಲ್ಲಿ ಮುಖ್ಯಮಂತ್ರಿಯಾದಾಗ ಪೂರ್ಣಗೊಳಿಸಿದರು. ಜಿಲ್ಲೆಯ ಜನರಿಗೆ ಯಾವ ರಾಜಕೀಯ ಪಕ್ಷದ ಸರ್ಕಾರ ಏನೇ ಕೊಡುಗೆ ಕೊಟ್ಟರೂ ನಾವು ಬೇಡ ಎನ್ನುವುದಿಲ್ಲ. ಹಾಗೆಯೇ ಯಾವುದೇ ಸರ್ಕಾರ ಜಿಲ್ಲೆಗೆ ನೀರಾವರಿ ಸೌಲಭ್ಯ, ಶಾಶ್ವತ ಕುಡಿಯುವ ನೀರಿನ ಸೌಲಭ್ಯ ಒದಗಿಸಿದರೂ ಅದಕ್ಕೆ ನಮ್ಮ ಸ್ವಾಗತವಿದೆ. ಆದರೆ ಕಳೆದ 10 ವರ್ಷ ರಾಜ್ಯದಲ್ಲಿ ಅಧಿಕಾರ ನಡೆಸಿದ ಬಿಜೆಪಿ ಹಾಗೂ ಕಾಂಗ್ರೆಸ್ ಸರ್ಕಾರಗಳಿಗೆ ಕೆರೆಗಳಿಗೆ ನೀರು ತುಂಬಿಸಿ ಶಾಶ್ವತ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು ನಾವೇನು ಅಡ್ಡಿ ಮಾಡಿದ್ದೇವೆಯೇ ಎಂದು ಪ್ರಶ್ನಿಸಿದರು.

ನೀರಾವರಿ ವಿಷಯದಲ್ಲಿ ದೇವೇಗೌಡರು ಪ್ರಶ್ನಾತೀತರು. ಕೇಂದ್ರ ಸರ್ಕಾರದಿಂದ ನೀರಾವರಿ ಯೋಜನೆಗಳಿಗೆ ಅನುದಾನ ಬಿಡುಗಡೆಯಾಗಲು ದೇವೇಗೌಡರು ಕಾರಣ. ಅವರು ಪ್ರಧಾನಿಯಾಗಿದ್ದಾಗ ರೂಪಿಸಿದ ನೀತಿಯಿಂದಾಗಿ ಇಂದು ಕರ್ನಾಟಕಕ್ಕೆ ನೀರಾವರಿ ಯೋಜನೆಗಳಿಗೆ ವರ್ಷಕ್ಕೆ 10 ರಿಂದ 15 ಸಾವಿರ ಕೋಟಿ ರೂ. ಅನುದಾನ ಬರುತ್ತಿದೆ ಎಂದರು.

(-4ನೇ ಪುಟಕ್ಕೆ)

ನಗರದಲ್ಲಿ ನಾಳೆ ಸರ್ಕಾರಿ ನೌಕರರ ಪ್ರತಿಭಾವಂತ ಮಕ್ಕಳಿಗೆ ಪುರಸ್ಕಾರ

ಹಾಸನ : ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದಿಂದ ಶನಿವಾರ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭ ಹಮ್ಮಿಕೊಂಡಿರುವುದಾಗಿ ಸಂಘದ ರಾಜ್ಯಾಧ್ಯಕ್ಷ ಬಾಗೂರು ಮಂಜೇಗೌಡ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಗುರುವಾರ ಅವರು ಮಾತನಾಡಿ, ನಗರದ ಎಂ.ಜಿ. ರಸ್ತೆ ಬಳಿ ಇರುವ ಶ್ರೀ ಅನ್ನಪೂರ್ಣೇಶ್ವರಿ ಕಲ್ಯಾಣ ಮಂಟಪದಲ್ಲಿ ಎಸ್.ಎಸ್.ಎಲ್.ಸಿ. ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ಸರಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಬೆಳಿಗ್ಗೆ 11 ಗಂಟೆಗೆ ಪ್ರಾರಂಭವಾಗುವ ಕಾರ್ಯಕ್ರಮದ ಉದ್ಘಾಟನೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಎ.ಮಂಜು ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಯಾಗಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಇತರರು ಭಾಗವಹಿಸುವರು. ಇದೇ ವೇಳೆ ಹೆಚ್ಚು ಅಂಕ ಪಡೆದ 400ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಗೌರವಿಸಲಾಗುತ್ತದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾ ಗೌರವಾಧ್ಯಕ್ಷ ವಿ.ಸತೀಶ್, ಪ್ರಧಾನ ಕಾರ್ಯದರ್ಶಿ ಕೆ.ಎಂ.ಶ್ರೀನಿವಾಸ್, ಸಾಂಸ್ಕೃತಿಕ ಕಾರ್ಯದರ್ಶಿ ಎ.ಜೆ. ವೆಂಕಟೇಶ್ ಇನ್ನಿತರರು ಇದ್ದರು.

ವಾಹನ ಡಿಕ್ಕಿ : ಅಪರಿಚಿತ ಪಾದಚಾರಿಯ ಸಾವು

ಸಕಲೇಶಪುರ: ತಾಲ್ಲೂಕಿನ ಶಿರಾಡಿ ಘಾಟ್ ಬೆಂಗಳೂರು-ಮಂಗಳೂರು ರಾಷ್ಟ್ರೀಯ ಹೆದ್ದಾರಿ ಬದಿ ನಡೆದು ಹೋಗುತ್ತಿದ್ದ ಅಪರಿಚಿತ ವ್ಯಕ್ತಿಯೊಬ್ಬರಿಗೆ ವಾಹನವೊಂದು ಡಿಕ್ಕಿ ಹೊಡೆದಿದ್ದು, ಅವರು ಸ್ಥಳದಲ್ಲಿಯೇ ಮೃತಪಟ್ಟ ಘಟನೆ ಬುಧವಾರ ರಾತ್ರಿ ನಡೆದಿದೆ.



ಮೃತ ವ್ಯಕ್ತಿ ಸುಮಾರು 30 ರಿಂದ 35 ವರ್ಷ ವಯಸ್ಸಿನವರಾಗಿದ್ದು, ಗುರುತು ತಿಳಿದು ಬಂದಿಲ್ಲ. ಡಿಕ್ಕಿ ಹೊಡೆದ ವಾಹನವೂ ಸಹ ಪತ್ತೆ ಆಗಿಲ್ಲ. ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತದೇಹವನ್ನು ಇಲ್ಲಿನ ಸರ್ಕಾರಿ ಕ್ರಾಫರ್ಡ್ ಆಸ್ಪತ್ರೆಯ ಶವಾಗಾರದಲ್ಲಿ ಇಡಲಾಗಿದೆ. ವಾರಸುದಾರರು ಇದ್ದರೆ ಪೊಲೀಸ್ ಠಾಣೆಯನ್ನು ಸಂಪರ್ಕಿಸುವಂತೆ ಕೋರಲಾಗಿದೆ.

ಕೆಪಿಟಿಸಿಎಲ್ ಅಧಿಕಾರಿಗಳು, ಕಟ್ಟಡ ಮಾಲೀಕರ ವಿರುದ್ಧ

ಲೋಕಾಯುಕ್ತರಿಗೆ ಆರೋಪ ಪಟ್ಟಿ

- ☐ ಕೆಪಿಟಿಸಿಎಲ್ ಅಧಿಕಾರಿಗಳ ವಿರುದ್ಧ ಆರೋಪ ಪಟ್ಟಿ
- ☐ ಜಿಲ್ಲಾ ಸತ್ರ ನ್ಯಾಯಾಲಯದಿಂದ ಇಂದು ವಿಚಾರಣೆ
- ☐ 50 ಚದರಡಿ ಕಟ್ಟಡದಲ್ಲಿ ವಿದ್ಯುತ್ ಪರಿವರ್ತಕ ಅಳವಡಿಸಿಕೊಳ್ಳುವ ಆರೋಪ
- ☐ ಕೆಇಆರ್‌ಸಿ ನಿಯಮ ಉಲ್ಲಂಘನೆ
- ☐ ಲೋಕಾಯುಕ್ತ ನ್ಯಾಯಾಲಯದಲ್ಲಿ ಎಫ್‌ಐಆರ್ ದಾಖಲು

ಹಾಸನ : ನಗರದ ಗೌರಿಕೊಪ್ಪಲಿನಲ್ಲಿ ನಿರ್ಮಿಸಿರುವ ಪಿ.ವಿ.ಆರ್. ಬಹು ಮಹಡಿ ವಾಣಿಜ್ಯ ಕಟ್ಟಡಕ್ಕೆ ಕೆಇಆರ್‌ಸಿ ನಿಯಮ ಉಲ್ಲಂಘಿಸಿ ವಿದ್ಯುತ್ ಪರಿವರ್ತಕ ಅಳವಡಿಸಿಕೊಳ್ಳದ ಪ್ರಕರಣದಲ್ಲಿ ಲೋಕಾಯುಕ್ತ ನ್ಯಾಯಾಲಯ ಮೂವರು ಕೆ.ಪಿ.ಟಿ.ಸಿ.ಎಲ್. ಅಧಿಕಾರಿಗಳು ಹಾಗೂ ಕಟ್ಟಡದ ಮಾಲೀಕರ ವಿರುದ್ಧ ಆರೋಪ ಪಟ್ಟಿ ಸಲ್ಲಿಸಿದೆ.

ಈ ಪ್ರಕರಣ ಕುರಿತು ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ವಿಚಾರಣೆ ನಡೆಯಲಿದೆ.

ವಿದ್ಯುತ್ ಪರಿವರ್ತಕ ಅಳವಡಿಸಿಕೊಳ್ಳದ ಪ್ರಕರಣಕ್ಕೆ ಸಂಬಂಧಿಸಿದಂತೆ ವಕೀಲ ಸಂದೀಪ್ ಎಂಬುವವರು ಲೋಕಾಯುಕ್ತ ನ್ಯಾಯಾಲಯಕ್ಕೆ ದೂರು ನೀಡಿದ್ದರು. 2014ರಲ್ಲಿ ಲೋಕಾಯುಕ್ತ ಅಧಿಕಾರಿಗಳು ಭ್ರಷ್ಟಾಚಾರ ನಿಗ್ರಹ ಕಾಯ್ದೆಯಡಿ ದೂರು ದಾಖಲಿಸಿಕೊಂಡು ತನಿಖೆ ನಡೆಸಿ 2017ರಲ್ಲಿ 318 ಪುಟಗಳ ಆರೋಪ ಪಟ್ಟಿ ಸಲ್ಲಿಸಿದ್ದಾರೆ. ತನಿಖೆ ವೇಳೆ ಬಹು ಮಹಡಿ ಕಟ್ಟಡ 50 ಚದರಡಿಗಿಂತ ಹೆಚ್ಚು ವಿಸ್ತೀರ್ಣ ಹೊಂದಿರುವುದು ಸಾಬೀತಾಗಿದ್ದು, ಕೆ.ಇ.ಆರ್.ಸಿ. ನಿಯಮದ ಪ್ರಕಾರ 50 ಚದರಡಿಗಿಂತ ಹೆಚ್ಚಿನ ಕಟ್ಟಡಕ್ಕೆ ಕಡ್ಡಾಯವಾಗಿ ವಿದ್ಯುತ್ ಪರಿವರ್ತಕ ಅಳವಡಿಸಿಕೊಳ್ಳಬೇಕು. ಕೆ.ಪಿ.ಟಿ.ಸಿ.ಎಲ್. ಅಧಿಕಾರಿಗಳಾದ ಬಿ.ಟಿ.ಲತಾ, ಮ್ಯಾನ್ಯುಯಲ್ ಕರುಣಾಕರ್, ಕೆ.ಸಿ.ಹೇಮಚಂದ್ರ ಅವರು 45 ಚದರಡಿಯಲ್ಲಿ ಕಟ್ಟಡ ನಿರ್ಮಿಸಲಾಗಿದೆ ಎಂದು ವಿವರ ನೀಡಿ, ವಿದ್ಯುತ್ ಪರಿವರ್ತಕ (ಟಿಸಿ) ಅಳವಡಿಸಿಕೊಳ್ಳಲು ಸೂಚಿಸಿಲ್ಲ. ಇದರಿಂದ ಸರ್ಕಾರದ ಬೊಕ್ಕಸಕ್ಕೆ 3 ಲಕ್ಷ ರೂ.ಗೂ ಅಧಿಕ ಹಣ ನಷ್ಟವಾಗಿದೆ ಎಂದು ಲೋಕಾಯುಕ್ತರು ಸಲ್ಲಿಸಿರುವ ಆರೋಪ ಪಟ್ಟಿಯಲ್ಲಿ ಉಲ್ಲೇಖಿಸಲಾಗಿದೆ. ಅಧಿಕಾರಿಗಳು ಹಾಗೂ ಕಟ್ಟಡ ಮಾಲೀಕ ಮಂಜೇಗೌಡ ಒಟ್ಟಾಗಿ ದಾಖಲೆ ತಿರುಚಿ ಈ ಅಕ್ರಮ ಎಸಗಿದ್ದಾರೆ ಎಂದು ದೂರಲಾಗಿದೆ.

ಬೈಕ್‌ಗೆ ಟಿಪ್ಪರ್ ಡಿಕ್ಕಿ : ಸವಾರ ಸಾವು

ಹಾಸನ : ತಾಲ್ಲೂಕಿನ ಕಾರೇಕೆರೆ ಗೇಟ್‌ನಲ್ಲಿ ಟಿಪ್ಪರ್‌ವೊಂದು ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಸವಾರ ಸ್ಥಳದಲ್ಲೇ ಸಾವನ್ನಪ್ಪಿರುವ ದುರ್ಘಟನೆ ಗುರುವಾರ ಸಂಜೆ 5.30ರಲ್ಲಿ ನಡೆದಿದೆ.

ಚನ್ನರಾಯಪಟ್ಟಣದಿಂದ ಹಾಸನ ಕಡೆಗೆ ಬರುತ್ತಿದ್ದ ಕೆ.ಎ.13-ಇ.ಜೆ.2886 ನಂಬರಿನ ಪಲ್ಸರ್ ಬೈಕ್‌ಗೆ ಹಿಂದಿನಿಂದ ಬಂದ ಕೆ.ಎ.13-ಎ.9704 ನಂಬರಿನ ಟಿಪ್ಪರ್ ಲಾರಿಯು ಡಿಕ್ಕಿ ಹೊಡೆಯಿತು. ಪರಿಣಾಮ ಬೈಕ್ ಸವಾರ ನುಗ್ಗೇಹಳ್ಳಿ ಸಮೀಪದ ತೆಂಕನಹಳ್ಳಿಯ ಕೃಷ್ಣ (24) ಸ್ಥಳದಲ್ಲೇ ಸಾವನ್ನಪ್ಪಿದನು.

ಕಾರೇಕೆರೆ ಗೇಟ್ ಬಳಿ ತಿರುವು ರಸ್ತೆ ಇದ್ದುದರಿಂದ ಹಿಂದಿನಿಂದ ದಿಢೀರ್ ನುಗ್ಗಿದ ಟಿಪ್ಪರ್ ಲಾರಿ ಬೈಕ್‌ಗೆ ಗುದ್ದಿದ ಪರಿಣಾಮ ಈ ಅವಘಡ ಸಂಭವಿಸಿದೆ.

ಈ ಬಗ್ಗೆ ಶಾಂತಿಗ್ರಾಮ ಪೊಲೀಸರು ಮೊಕದ್ದಮೆ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

ಉತ್ತರಕ್ರಿಯಾರಾಧನೆಗೆ ಆಹ್ವಾನ

ಶ್ರೀಮತಿ ಕಮಲಮ್ಮ
ನಿಧನ : 27-09-2017

ದಿ|| ಶ್ರೀಮತಿ ಹುಂಬಮ್ಮ ಮತ್ತು ದಿ|| ಶ್ರೀ ಚಿನ್ನಪ್ಪಗೌಡರ ಮಗ
ಶ್ರೀ ಎಂ.ಸಿ.ವೆಂಕಟರಾಮು, ಮಾಜಿ ಛೇರ್ಮನ್
ಮಾವಿನಹಳ್ಳಿ, ಹಾಸನ ಕಸಬಾ
ಇವರು ಮಾಡುವ ವಿಜ್ಞಾಪನೆಗಳು
ದಿನಾಂಕ 27-09-2017ನೇ ಬುಧವಾರ ನನ್ನ ಧರ್ಮಪತ್ನಿ
ಶ್ರೀಮತಿ ಕಮಲಮ್ಮ ನವರು
ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇನೆ. ತತ್ಸಂಬಂಧವಾದ
"ಉತ್ತರಕ್ರಿಯಾದಿ"ಯನ್ನು ದಿ. 07-10-2017ನೇ ಶನಿವಾರ
ಮಧ್ಯಾಹ್ನ 12.30 ಗಂಟೆಗೆ ಮೃತರ ಸ್ವಗೃಹ ಮಾವಿನಹಳ್ಳಿ ಗೇಟ್
ಇಲ್ಲಿ ನಡೆಸಲು ನಿಶ್ಚಯಿಸಿರುವುದರಿಂದ ತಾವುಗಳು ಆಗಮಿಸಿ
ಮೃತರ ಆತ್ಮಕ್ಕೆ ಚಿರಶಾಂತಿ ಬಯಸಬೇಕಾಗಿ ಕೋರುವ,

ದುಃಖಭಾಗಿಗಳು :
ಮಕ್ಕಳು, ಹೆಣ್ಣು ಮಕ್ಕಳು, ಸೊಸೆಯಂದಿರು
ಅಳಿಯಂದಿರು, ಮೊಮ್ಮಕ್ಕಳು ಮತ್ತು
ಮಾವಿನಹಳ್ಳಿ ವಂಶಸ್ಥರು ಹಾಗೂ ಬಂಧು - ಮಿತ್ರರು

ತಮ್ಮ ಆಗಮನಾಭಿಲಾಷಿ :
ಶ್ರೀ ಎಂ.ಸಿ.ವೆಂಕಟರಾಮು
ಮಾಜಿ ಛೇರ್ಮನ್, ಮಾವಿನಹಳ್ಳಿ

ವಿ.ಸೂ. : ಆಹ್ವಾನಪತ್ರಿಕೆ ತಲುಪದಿದ್ದವರು ಇದನ್ನೇ ಆಹ್ವಾನವೆಂದು ಪರಿಗಣಿಸಿ ಆಗಮಿಸಬೇಕಾಗಿ ವಿನಂತಿ.